# ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ:-ನಾಗಮಂಗಲ ತಾಲ್ಲೂಕು ಪಂಚಾಯತಿಯಲ್ಲಿ 2013-14ನೇ ಸಾಲಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕಟ್ಟಡ ಯೋಜನೆಯ ಅನುದಾನದಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರ ವಿರುದ್ಧದ ಜಂಟಿ ಇಲಾಖಾ ವಿಚಾರಣೆ ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ ಆದೇಶ.

ಓದಲಾಗಿದೆ:(1). ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ,ಮೈಸೂರು ಇವರ ಪತ್ರ ಸಂಖ್ಯೆ: ಉಕಾ- 1/ಸಿ-9/ಸಿಸಿಎ/ಸಿಆರ್-01/ /2014-15 ದಿನಾಂಕ:27-08-2015.

(2) ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ 139 ವಿಸೇಬಿ 2015 ದಿನಾಂಕ:04-05-2016.

(3).ಅಪಾದಿತರ ಲಿಖಿತ ಹೇಳಿಕೆಗಳು.

-------

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ:(1)ರ 27-08-2015ರ ಪತ್ರದಲ್ಲಿ, 2013-14 ನೇ ಸಾಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕಟ್ಟಡ ಯೋಜನೆಯ ಅನುದಾನದಲ್ಲಿ ನಾಗಮಂಗಲ ತಾಲ್ಲೂಕಿನ 109 ಅಂಗನವಾಡಿ ಕೇಂದ್ರಗಳಿಗೆ ಕನಿಷ್ಠ 2 ವಿದ್ಯುತ್ ದೀಪ ಹಾಗೂ ಒಂದು ಫ್ಯಾನ್ ಅಳವಡಿಸಲು ಅಥವಾ ಅಗತ್ಯಕ್ಕೆ ಅನುಗುಣವಾಗಿ ವಿದ್ಯುತ್ ದೀಪ ಅಳವಡಿಸುವ ಕಾಮಗಾರಿಗೆ ತಲಾ ರೂ.8,500/-ರಂತೆ ಒಟ್ಟು ರೂ.9,25,000/-ಗಳಿಗೆ ದಿ:04-06-2013ರ ನಾಗಮಂಗಲ ತಾಲ್ಲೂಕು ಪಂಚಾಯತ್ ಸಾಮಾನ್ಯ ಸಭೆಯ ನಿರ್ಣಯದಂತೆ ಅನುಮೋದನೆ ಪಡೆದಿದ್ದು, 109 ಅಂಗನವಾಡಿ ಕೇಂದ್ರಗಳ ಪೈಕಿ 30 ಅಂಗನವಾಡಿ ಕೇಂದ್ರಗಳಿಗೆ ಕಾಮಗಾರಿಗಳು ಪೂರ್ಣಗೊಳ್ಳದೆ ಇದ್ದರೂ ಪರಿಶೀಲಿಸದೆ ಬಿಲ್ಲು ಪಾವತಿಸಿರುವ ಅಂದಾಜು ಮೊತ್ತ ರೂ. 2,55,000/-ಗಳ ದುರುಪಯೋಗಕ್ಕೆ ಕಾರಣರಾಗಿ, ಸರ್ಕಾರಿ ನೌಕರರಿಗೆ ತರವಲ್ಲದೆ ರೀತಿಯಲ್ಲಿ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮಾವಳಿ 1966ರ ನಿಯಮ 3(1)ರ ಉಪನಿಯಮ (i)(ii)(iii) ಅನ್ನು ಉಲ್ಲಂಘಿಸಿರುಸಿರುವ ಆರೋಪಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ರವರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

1. ಶ್ರೀ. ಬೆಟ್ಟಸ್ವಾಮಿಗೌಡ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ನಾಗಮಂಗಲ.
2. ಶ್ರೀ. ಚಂದ್ರಹಾಸ, ಹಿಂದಿನ ಪ್ರಭಾರ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ನಾಗಮಂಗಲ.
3. ಶ್ರೀ. ಬಿ. ಕೆ. ವಿಶ್ವನಾಥ್, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ.
4. ಶ್ರೀ. ಜವರೇಗೌಡ, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ.
5. ಶ್ರೀ. ಜೆ. ರಘುನಾಥ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ.

ಪ್ರಸ್ತಾವನೆಯನ್ನು ಪರಿಶೀಲಿಸಿ ಪ್ರಕರಣದಲ್ಲಿ ಹಣ ದುರುಪಯೋಗದಂತಹ ಗಂಭೀರ ಸ್ವರೂಪದ ಅವ್ಯವಹಾರದ ಆರೋಪಗಳು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು 1957ರ ನಿಯಮ 11ರಡಿಯಲ್ಲಿ ಕಾರಣ ಕೇಳುವ ನೋಟಿಸಿನೊಂದಿಗೆ ದೋಷಾರೋಪಣ ಪಟ್ಟಿಯನ್ನು ದಿನಾಂಕ: 04-05-2016 ರಂದು ಮೇಲೆ ಓದಲಾದ ದಿನಾಂಕ: 04-05-2016 ರಂದು ಜಾರಿ ಮಾಡಲಾಗಿತ್ತು.

ಸದರಿ ನೋಟೀಸ್‌ಗೆ ಮೇಲ್ಕಂಡ ಆಪಾದಿತರು ಲಿಖಿತ ಹೇಳಿಕೆಗಳನ್ನು ಸಲ್ಲಿಸುತ್ತಾ, ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಂಡ್ಯ ಇವರು ಸಲ್ಲಿಸಿರುವ ವರದಿಯು ಸಂಪೂರ್ಣ ದೋಷಪೂರಿತವಾಗಿದ್ದು, ಕಾಮಗಾರಿಯಲ್ಲಿ ಯಾವುದೇ ದುರುಪಯೋಗವಾಗಿರುವುದಿಲ್ಲವೆಂದು ತಮ್ಮ ವಿರುದ್ಧದ ಆರೋಪವನ್ನು ನಿರಾಕರಿಸುತ್ತಾ, ತಮ್ಮ ಸಮಜಾಯಿಷಿ ಒಪ್ಪಿ ಆರೋಪ ಮುಕ್ತರನ್ನಾಗಿ ಮಾಡಲು ಕೋರಿರುತ್ತಾರೆ. ಆಪಾದಿತರ ಲಿಖಿತ ಹೇಳಿಕೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿದ್ದು, ಪ್ರಕರಣದಲ್ಲಿ ಹಣ ದುರುಪಯೋಗದ ಗಂಭೀರ ಸ್ವರೂಪದ ಅವ್ಯವಹಾರದ ಆರೋಪಗಳಿರುವುದರಿಂದ ಆಪಾದಿತರ ವಿರುದ್ಧದ ಮಾಡಲಾದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯುವ ಸಲುವಾಗಿ ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ವಿಸೇಜಿ 2015 ಬೆಂಗಳೂರು ದಿನಾಂಕ:14-07-2016.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅನುಸಾರ ಮತ್ತು ಸದರಿ ನಿಯಮಗಳ ನಿಯಮ 13 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಆದೇಶಿಸಿದೆ.

1. ಶ್ರೀ. ಬೆಟ್ಟಸ್ವಾಮಿಗೌಡ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ನಾಗಮಂಗಲ.
2. ಶ್ರೀ. ಚಂದ್ರಹಾಸ, ಹಿಂದಿನ ಪ್ರಭಾರ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ನಾಗಮಂಗಲ.
3. ಶ್ರೀ. ಬಿ. ಕೆ. ವಿಶ್ವನಾಥ್, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ.
4. ಶ್ರೀ. ಜವರೇಗೌಡ, ಹಿಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ.
5. ಶ್ರೀ. ಜೆ. ರಘುನಾಥ್, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ನಾಗಮಂಗಲ.

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಿಗಳ ನಿಯಮ 11(2) ರ ಪ್ರಕಾರ ಶ್ರೀ ಕೆ. ರಾಧಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ಮತ್ತು ಸತ್ರನ್ಯಾಯಾಧೀಶರು, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ ಮಂಡ್ಯ ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ ಪ್ರತಿಯೊಬ್ಬ ಆಪಾದಿತ ಅಧಿಕಾರಿ ವಿರುದ್ಧದ ಪ್ರತಿಯೊಂದು ಆರೋಪಗಳು ಸಾಬೀತಾಗಿರುವ/ಸಾಬೀತಾಗಿಲ್ಲದಿರುವ ಬಗ್ಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ಕೈಗೊಳ್ಳತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/42/ ಸೇಇವಿ/2014 ದಿನಾಂಕ:08-01-2015 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ.25,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

14/7/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ. ಜಿ&ಪಿ).
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

108

ಗೆ:

1. ಪ್ರಧಾನ ಮಹಾಲೇಖಪಾಲರು(ಎ&ಇ)ರವರ ಕಾರ್ಯದರ್ಶಿ, ಕರ್ನಾಟಕ ಹೊಸಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂ-5329, ಬೆಂಗಳೂರು-560001.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ /ಬೆಂಗಳೂರು ಗ್ರಾಮಾಂತರ.
3. ಶ್ರೀ ಕೆ. ರಾಧಕೃಷ್ಣ ಹೊಳ್ಳ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮನೆ ನಂ. 180, ಲಿಂಕ್ ರೋಡ್, ಮಲ್ಲೇಶ್ವರಂ, ಬೆಂಗಳೂರು-560003.
4. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ಮಂಡ್ಯ (ಮಂಡನಾಧಿಕಾರಿ).
5. ಆಪಾದಿತ ಅಧಿಕಾರಿಗಳಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮಂಡ್ಯ ಇವರ ಮುಖಾಂತರ)

<u>ಪ್ರತಿಯನ್ನು:-</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ .ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.